ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 : ದಿನಾಂಕ : 28–07–2018

## ಪತ್ರಿಕಾ ಪ್ರಕಟಣೆ

**ಸಂಖ್ಯೆ 744/844**

# Licence must for live and recorded music performances

**Bengaluru, July 28(Karnataka Information)**

The Hon'ble Supreme Court in Civil Appeal No. 4741/2007 has upheld the Licensing and Controlling of Places of Public Entertainment (Bangalore City) Order, 2005 and ordered the Police Commissioner, Bengaluru City to implement the said Order. As per the Hon'ble Supreme Court Orders licence is a must to have Music (Live or Recorded) in all the places of Public Entertainment. Failure to obtain licence may result in the closure of the music and other performances.

**ಸಂಖ್ಯೆ 745/845**

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 29-07-2018 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಜ್ಯೋತಿಹೆಡ್ಗೆ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**ಸಂಖ್ಯೆ 746/846**

# ಅವಧಿ ವಿಸ್ತರಣೆ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)

ಜೂನ್-2018ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

ಜೂನ್ 2018ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಂತಿಮ ವಿಸ್ತರಣೆ ಮಾಡಿದ ಕೊನೆಯ ದಿನಾಂಕ

**30.07.2018. ಜೂನ್ 2018ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ 06.08.2018**

**ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳ ವರೆಗೆ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿಸಲ್ಲಿಸಿ ಸೇವೆ ಪಡೆಯುಬಹುದಾಗಿದೆ. ಈ ಸಂಬಂಧ ರಾಜ್ಯದ ಎಲ್ಲಾ ಅಭ್ಯರ್ಥಿಗಳು/ಪೋಷಕರು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.**

**ಸಂಖ್ಯೆ 747/847**

## ಎಸಿಬಿ ದಾಳಿ

**ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)**

ದಿನಾಂಕ: 27-07-2018 ರಂದು ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ನಗರ ವಿಭಾಗವು ಶ್ರೀ. ನವನೀತ್ ಮೋಹನ್, ಕಾರ್ಖಾನೆಗಳ ಉಪ ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರ್ಸ್, ಕೈಗಾರಿಕಾ ಸುರಕ್ಷಾ ಮತ್ತು ಸ್ವಾಸ್ಥ್ಯ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು ಎಂಬುವವರು ತಮ್ಮ ಬಲ್ಲ ಮೂಲಗಳಿಂದ ಅಸಮತೋಲನ ಆಸ್ತಿ-ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ, ಅಕ್ರಮ ಆಸ್ತಿ ಗಳಿಕೆ ಪ್ರಕರಣವನ್ನು ದಾಖಲಿಸಿರುತ್ತಾರೆ ಮತ್ತು ಈ ಕೆಳಕಂಡ ಸ್ಥಳಗಳಲ್ಲಿ ಶೋಧನೆ ನಡೆಸಲಾಗಿದೆ.

1) ಬೆಂಗಳೂರು ಗಂಗಾನಗರದ ವಾಸದ ಮನೆ

2) ಬೆಂಗಳೂರು ಆರ್.ಟಿ.ನಗರ, ಶಾಂಪುರದಲ್ಲಿರುವ ಮನೆ ಹಾಗೂ

3) ಆಪಾದಿತ ಅಧಿಕಾರಿ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿ.

ಈವರೆಗೆ ಶೋಧನೆ ನಡಸಲಾದ ಸ್ಥಳಗಳಲ್ಲಿ ಪತ್ತೆಯಾದ ಚರ ಮತ್ತು ಸ್ಥಿರ ಆಸ್ತಿಗಳ ವಿವರ :

**1 ಮನೆ, 5 ನಿವೇಶನಗಳು, 15 ಎಕರೆ ಕೃಷಿ ಜಮೀನು ಮತ್ತು ಫಾರ್ಮಹೌಸ್, 1 ಪೆಟ್ರೋಲ್ ಬಂಕ್, 661 ಗ್ರಾಂ ಚಿನ್ನ, 18 ಕೆ.ಜಿ 278 ಗ್ರಾಂ ಬೆಳ್ಳಿ, ₹ 3,63 ಲಕ್ಷ ನಗದು, 1 ಕಾರು, 1 ಬೈಕ್ ಹಾಗು ₹ 37.80 ಲಕ್ಷ ಬೆಲೆಯ ಗೃಹೋಪಯೋಗಿ ವಸ್ತುಗಳು.**

ತನಿಖೆ ಮುಂದುವರೆದಿದ್ದು, ಆರೋಪಿತ ಸರ್ಕಾರಿ ನೌಕರನು ಹೊಂದಿರುವ ಆಸ್ತಿ-ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಹಾಗೂ ದಾಖಲೆಗಳ ಪರಿಶೀಲನಾ ಕಾರ್ಯ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ 748/848**

# ACB Raid

**Bengaluru, July (Karnataka Information)**

On 27.07.2018 ACB, Bengaluru City Division has conducted raids over the properties of Shri. Navaneeth Mohan, Deputy Director of Factories, Department of Factories, Boilers, Industrial Safety and Health, Karmika Bhavan, Bannerghatta Road, Bengaluru who is belived to have amassed disproportionate assets beyond his known sources of income. Raids were conducted at his 1] Ganganagar residence 2] R.T.Nagar residence and 3] his Office. Details of the properties identified during the raids are as follows:

**1 House, 5 Residential Sites, 15 Acres of Farm Land & 1 Farm House, 1 Petrol Bunk, 661 gms Gold, 18.278 Kg Silver, 1 Car, 1 Bike, Cash ₹ 3.63 Lakhs and household items worth ₹ 37.80 lakhs were found.**

Investigation is continued and efforts are being put to find out the Source of Income and other possible places for the Search says official press release.

**ಸಂಖ್ಯೆ 749/849**

# ಕಾರ್ಗಿಲ್ ದಿವಸ್ – ಮಾಜಿ ಯೋಧನಿಗೆ ಸನ್ಮಾನ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಗ್ರೂಪ್ ‘ಡಿ’ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ರಮೇಶ್ ಪಿ.ಸಿ, ಅವರು 1999 ನೇ ಸಾಲಿನಲ್ಲಿ ಜರುಗಿದ ಕಾರ್ಗಿಲ್ ಯುದ್ಧದಲ್ಲಿ ಪಾಲ್ಗೊಂಡಿದ್ದ ಯೋಧನಿಗೆ ಜುಲೈ 26 ರಂದು ಆಚರಿಸಲಾದ ಕಾರ್ಗಿಲ್ ವಿಜಯೋತ್ಸವ ದಿನಾಚರಣೆ ದಿನದಂದು ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ನ್ಯಾಯಮೂರ್ತಿ ಇಂದ್ರಕಲಾ ಅವರು ರಮೇಶ್ ಅವರನ್ನು ತಮ್ಮ ಕಚೇರಿಯಲ್ಲಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

***

**ಛಾಯಾಶೀರ್ಷಿಕೆ :** ನ್ಯಾಯಮೂರ್ತಿ ಇಂದ್ರಕಲಾ ಅವರು ಕಾರ್ಗಿಲ್ ಯುದ್ದದಲ್ಲಿ ಪಾಲ್ಗೊಂಡಿದ್ದ ಯೋಧ ರಮೇಶ್ ಪಿ.ಸಿ. ಅವರನ್ನು ತಮ್ಮ ಕಚೇರಿಯಲ್ಲಿ ಸನ್ಮಾನಿಸಿದರು.

**ಸಂಖ್ಯೆ 750/850**

## ಜುಲೈ 29 ಹಾಗೂ 30 ರಂದು
## ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರ ಮತ್ತು ರಾಜ್ಯಮಟ್ಟದ ಗಾಳಿಪಟ ಉತ್ಸವ

**ಬೆಂ.ಗ್ರಾ.ಜಿಲ್ಲೆ ಜುಲೈ 28 (ಕರ್ನಾಟಕ ವಾರ್ತೆ):** ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಜ್ಯ ಪ್ರವಾಸೋದ್ಯಮ ಇಲಾಖೆ, ಕರ್ನಾಟಕ ಜಾನಪದ ಪರಿಷತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ದೊಡ್ಡಬಳ್ಳಾಪುರ ಗಾಳಿಪಟ ಕಲಾ ಸಂಘ(ರಿ.) ಇವರ ಸಹಯೋಗದೊಂದಿಗೆ ರಾಷ್ಟ್ರ ಮತ್ತು ರಾಜ್ಯಮಟ್ಟದ "ಗಾಳಿಪಟ ಉತ್ಸವ-2018" ಮತ್ತು 30ನೇ ವರ್ಷದ ರಾಜ್ಯ ಮಟ್ಟದ "ಗಾಳಿಪಟ ಸ್ಪರ್ಧೆ"ಯನ್ನು ಜುಲೈ 29 ಹಾಗೂ 30 ರಂದು ಬೆಳಿಗ್ಗೆ 10 ಗಂಟೆಗೆ ದೊಡ್ಡಬಳ್ಳಾಪುರ ತಾಲ್ಲೂಕಿನ ಭುವನೇಶ್ವರಿ ನಗರದ ಶ್ರೀ ಎನ್.ಮುನಿನಂಜಪ್ಪನವರ ಜಮೀನಿನಲ್ಲಿ ಏರ್ಪಡಿಸಲಾಗಿದೆ.

ಪ್ರವಾಸೋದ್ಯಮ ಮತ್ತು ರೇಷ್ಮೆ ಇಲಾಖೆ ಸಚಿವರಾದ ಸಾ.ರಾ ಮಹೇಶ್ ಅವರು ರಾಷ್ಟ್ರಮಮಟ್ಟದ ಗಾಳಿಪಟ ಉತ್ಸವವನ್ನು ಜುಲೈ 29 ರಂದು ಬೆಳಿಗ್ಗೆ 10 ಗಂಟೆಗೆ ಉದ್ಘಾಟಿಸಲಿದ್ದು, ದೊಡ್ಡಬಳ್ಳಾಪುರ ಶಾಸಕರಾದ ಟಿ.ವೆಂಕಟರಮಣಯ್ಯರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಸದರಾದ ಡಾ॥ಎಂ.ವೀರಪ್ಪ ಮೊಯಿಲಿ, ಹೊಸಕೋಟೆ ಶಾಸಕರಾದ ಎಂ.ಟಿ.ಬಿ ನಾಗರಾಜ್, ದೇವನಹಳ್ಳಿ ಶಾಸಕರಾದ ನಿಸರ್ಗ ನಾರಾಯಣಸ್ವಾಮಿ, ನೆಲಮಂಗಲ ಶಾಸಕರಾದ ಡಾ॥ಕೆ.ಶ್ರೀನಿವಾಸಮೂರ್ತಿ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ರವಿ, ಆ.ದೇವೇಗೌಡ, ಜಿಲ್ಲಾಪಂಚಾಯಿತಿ ಅಧ್ಯಕ್ಷರಾದ ವಿ.ಪ್ರಸಾದ್, ಉಪಾಧ್ಯಕ್ಷರಾದ ಪಿ.ಎನ್.ಅನಂತಕುಮಾರಿ, ದೊಡ್ಡಬಳ್ಳಾಪುರ ನಗರಸಭೆ ಅಧ್ಯಕ್ಷರಾದ ತ.ನ.ಪ್ರಭುದೇವ, ಉಪಾಧ್ಯಕ್ಷರಾದ ಜಯಲಕ್ಷ್ಮಿ ನಟರಾಜ್ ಸೇರಿದಂತೆ ಜಿಲ್ಲಾ ಪಂಚಾಯಿತಿ ಸದಸ್ಯರುಗಳು, ನಗರಸಭೆ ಸದಸ್ಯರುಗಳು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ರಾಜ್ಯ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಾದ ಬಿ.ರಾಮು, ಜಿಲ್ಲಾಧಿಕಾರಿ ಎಸ್.ಪಾಲಯ್ಯ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆರ್.ಲತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಟಿ.ಎಸ್.ಶಿವಕುಮಾರ್, ಕರ್ನಾಟಕ ಜಾನಪದ ಪರಿಷತ್ ಅಧ್ಯಕ್ಷರಾದ ಟಿ.ತಿಮ್ಮೇಗೌಡ, ಕರ್ನಾಟಕ ಜಾನಪದ ಪರಿಷತ್ ಮ್ಯಾನೇಜಿಂಗ್ ಟ್ರಸ್ಟಿ ಆದಿತ್ಯ ನಂಜರಾಜ್, ದೊಡ್ಡಬಳ್ಳಾಪುರ ಗಾಳಿಪಟ ಕಲಾಸಂಘದ ಅಧ್ಯಕ್ಷ ಎಸ್.ಸಿ.ಜಗದೀಶ್ ಭಾಗವಹಿಸಲಿದ್ದಾರೆ.

ರಾಷ್ಟ್ರಮಮಟ್ಟದ ಗಾಳಿಪಟ ಉತ್ಸವದ ಅಂಗವಾಗಿ ಜುಲೈ 29 ರಂದು ಬೆಳಿಗ್ಗೆ 10-30 ರಿಂದ ಸಂಜೆ 8-00 ಗಂಟೆಯವರೆಗೆ ಹೊರರಾಜ್ಯಗಳಿಂದ ಆಗಮಿಸಿರುವ ಗಾಳಿಪಟ ಕಲಾವಿದರು ಹಾಗೂ ದೊಡ್ಡಬಳ್ಳಾಪುರ ಗಾಳಿಪಟ ಕಲಾಸಂಘದ ಸದಸ್ಯರುಗಳಿಂದ ತಮ್ಮ ವಿಶಿಷ್ಟ ವಿನ್ಯಾಸದ ಗಾಳಿಪಟಗಳ ಹಾರಾಟ ಪ್ರದರ್ಶನ ನಡೆಯಲಿದೆ.

ರಾಜ್ಯಮಟ್ಟದ ಗಾಳಿಪಟ ಸ್ಪರ್ಧೆ ಅಂಗವಾಗಿ ಜುಲೈ 30 ರಂದು ಮಧ್ಯಾಹ್ನ 12-00 ಗಂಟೆಯಿಂದ 3-00 ಗಂಟೆಯವರೆಗೆ ಗಾಳಿಪಟ ಸ್ಪರ್ಧೆ ನಡೆಯಲಿದೆ. ಸಂಜೆ 4-00 ಗಂಟೆಗೆ ಬಹುಮಾನ ವಿತರಣೆ ಹಾಗೂ ಸಮಾರೋಪ ಸಮಾರಂಭ ನಡೆಯಲಿದೆ.